ಬೆಂಗಳೂರು
ಕೇಂದ್ರ ವಿಶ್ವವಿದ್ಯಾಲಯ
BENGALURU
CENTRAL UNIVERSITY
ಆಗು ನೀ ಅನಿಕೇತನ
BE BOUNDLESS

# ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ

ಸಂಖ್ಯೆ: ಬೆಂ.ಕೇಂ.ವಿ/53/2018-19 ದಿನಾಂಕ: 10.01.2019

ರವರಿಗೆ,

ಪ್ರಾಂಶುಪಾಲರು
ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ
ಎಲ್ಲಾ ಸಂಯೋಜಿತ ಕಾಲೇಜುಗಳಿಗೆ
ಬೆಂಗಳೂರು.

ಮಾನ್ಯರೆ,

**ವಿಷಯ: "ಜಾನಪದ ಝೇಂಕಾರ" ಜನಪದ ನೃತ್ಯ ಮತ್ತು ಸಂಗೀತ ಸ್ಪರ್ಧೆಗೆ ಕಾಲೇಜುಗಳ ಕಲಾ ತಂಡಗಳನ್ನು ಕಳಿಸುವ ಬಗ್ಗೆ:-**

*****

ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಮತ್ತು ಬಸವನಗುಡಿ ರೋಟರಿ ಕ್ಲಬ್ ಸಂಯುಕ್ತಾಶ್ರಯದಲ್ಲಿ ಜಾನಪದ ಝೇಂಕಾರ ಎಂಬ ಹೆಸರಿನ ಜಾನಪದ ನೃತ್ಯ ಮತ್ತು ಸಂಗೀತ ಸ್ಪರ್ಧೆಯನ್ನು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದೆ ಈ ಸ್ಪರ್ಧೆಯು ಪದವಿ ವಿದ್ಯಾರ್ಥಿಗಳಿಗೆ ಮೀಸಲಾಗಿದ್ದು, **ಫೆಬ್ರವರಿ ತಿಂಗಳ ದಿನಾಂಕ:04, 05 ಮತ್ತು 06, 2019 ರಂದು ಅರ್ಹತಾ ಸುತ್ತಿನ ಸ್ಪರ್ಧೆಗಳು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿವೆ**. ದಿನಾಂಕ: 08.02.2019 ರಂದು ಅಂತಿಮ ಸುತ್ತಿನ ಸ್ಪರ್ಧೆ ಹಾಗೂ ಪ್ರಶಸ್ತಿ ವಿತರಣೆಯ ಸಮಾರಂಭ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿವೆ. ಕಾಲೇಜುಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೂಕ್ತ ವೇದಿಕೆಯನ್ನು ಕಲ್ಪಿಸುವುದು ಹಾಗೂ ಜಾನಪದ ಸಂಸ್ಕೃತಿ ಮತ್ತು ಕಲೆಗಳ ಕುರಿತು ಅರಿವು ಮೂಡಿಸುವ ಉದ್ದೇಶವನ್ನು ಈ ಕಾರ್ಯಕ್ರಮ ಹೊಂದಿದೆ. ಸ್ಪರ್ಧೆಯ ವಿಜೇತರಿಗೆ ಪ್ರಶಸ್ತಿಗಳ ಜೊತೆ ನಗದು ಬಹುಮಾನಗಳನ್ನು ನೀಡಲಾಗುವುದು. ಈ ಕಾರ್ಯಕ್ರಮವನ್ನು ಬಸವನಗುಡಿ ರೋಟರಿ ಡಿಸ್ಟ್ರಿಕ್ಟ್ ರವರು ನಡೆಸಿಕೊಡುವರು ತಮ್ಮ ಕಾಲೇಜಿನಲ್ಲಿ ಇರುವ ಜಾನಪದ ನೃತ್ಯ ಹಾಗೂ ಜಾನಪದ ಗಾಯನ ತಂಡಗಳನ್ನು ಈ ಪ್ರತಿಷ್ಟಿತ ಸ್ಪರ್ಧೆಗೆ ತಪ್ಪದೆ ಕಳುಹಿಸಿಕೊಡಲು ಸೂಚಿಸಲಾಗಿದೆ ಹಾಗೂ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರುತ್ತೇನೆ. ಭಾಗವಹಿಸಲು ಇಚ್ಚಿಸುವ ಕಾಲೇಜಿನ ಸಾಂಸ್ಕೃತಿಕ ತಂಡಗಳು ವಿದ್ಯಾರ್ಥಿಗಳ ಹೆಸರುಗಳನ್ನು ನೋಂದಾಯಿಸಲು ಹಾಗೂ ಹೆಚ್ಚಿನ ವಿವರಗಳಿಗಾಗಿ ಈ ಕೆಳಗಿನ ವ್ಯಕ್ತಿಗಳನ್ನು ಸಂಪರ್ಕಿಸಲು ಸೂಚಿಸಲಾಗಿದೆ.

1. Rtn. Latha Krishna – 9740097152, lata.krishna@yahoo.com
2. Rtn. Suresh Kumar Dorairaj – 9845395339 , sureshkumar.d@bhorukasteel.com

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

**ಕುಲಸಚಿವರು**

ಸೆಂಟ್ರಲ್ ಕಾಲೇಜು ಆವರಣ, ಡಾ. ಬಿ ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು – 560001
ದೂರವಾಣಿ : 080-2213 1385 ಫ್ಯಾಕ್ಸ್ : 080-2213 1383 ಇ-ಮೇಲ್ : registrarbcu@gmail.com